| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 894 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕುಶಾಲಪ್ಪ ಎಂ ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 26/12/2022 |
| ಉತ್ತರಿಸಬೇಕಾದ ಸಚಿವರು | ಮಾನ್ಯ ಆರೋಗ್ಯ & ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯ ಮಡಿಕೇರಿ ಮತ್ತು ವಿರಾಜಪೇಟೆ ಕ್ಷೇತ್ರದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಇಲ್ಲದಿರುವುದರಿಂದ ಅಲ್ಲಿನ ಸಾರ್ವಜನಿಕರು ಮೈಸೂರು, ಬೆಂಗಳೂರು, ಮಂಗಳೂರಿನ ಆಸ್ಪತ್ರೆಗಳಿಗೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಡಿಕೇರಿ ಅಧೀನ ಬೋಧಕ ಆಸ್ಪತ್ರೆಯು 300 ಹಾಸಿಗೆ ಸಾಮರ್ಥ್ಯ ಹೊಂದಿದ್ದು ಹೆಚ್ಚುವರಿಯಾಗಿ 450 ಹಾಸಿಗೆ ಸಾಮರ್ಥ್ಯದ ಮಲ್ಟಿಸ್ಪೆಷಾಲಿಟಿ ಕಟ್ಟಡ ಕಾಮಗಾರಿ ಪ್ರಗತಿಯಲ್ಲಿದ್ದು, ಲಭ್ಯವಿರುವ ಎಲ್ಲಾ ಚಿಕಿತ್ಸೆಗಳನ್ನು ಆಸ್ಪತ್ರೆಯಲ್ಲಿಯೇ ಒದಗಿಸಲಾಗುತ್ತಿದೆ. ಸೂಪರ್ ಸ್ಪೆಷಾಲಿಟಿ ಚಿಕಿತ್ಸೆ ಅಗತ್ಯ ಸಂದರ್ಭಗಳಲ್ಲಿ ಮಾತ್ರ ರೋಗಿಗಳ ಇಚ್ಛಾನುಸಾರ ಶಿಫಾರಸ್ಸು ಮಾಡಲಾಗುತ್ತಿದೆ. |
| ಆ) | ರಾಜ್ಯದಲ್ಲಿ ಯಾವ ಯಾವ ಭಾಗಕ್ಕೆ ಈಗಾಗಲೇ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳು ಮಂಜೂರಾಗಿವೆ ಹಾಗೂ ಕಾಮಗಾರಿಗಳು ಯಾವ ಹಂತದಲ್ಲಿದೆ; ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಪ್ರಾರಂಭಿಸಲು ಇರುವ ಮಾನದಂಡಗಳೇನು; | ರಾಜ್ಯದಲ್ಲಿ ಈಗಾಗಲೇ ಕಾರ್ಯನಿರ್ವಹಿಸುತ್ತಿರುವ 10 ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳು ಮಂಜೂರಾಗಿರುತ್ತವೆ. ವಿವರ ಕೆಳಕಂಡಂತೆ ಇರುತ್ತವೆ. 1) ಎಸ್ ಡಿಎಸ್ ಟಿಆರ್ ಸಿ ಮತ್ತು ರಾಜೀವ್ ಗಾಂಧಿ ಎದೆರೋಗಗಳ ಸಂಸ್ಥೆ, ಬೆಂಗಳೂರು, 2)ಜಯದೇವ ಹೃದ್ರೋಗ ಸಂಸ್ಥೆ, 3)ಕಿದ್ವಾಯಿ ಸ್ಮಾರಕ ಗಂಥಿ ಆಸ್ಪತ್ರೆ, 4)ಇಂದಿರಾಗಾAಧಿ ಮಕ್ಕಳ ಆರೋಗ್ಯ ಸಂಸ್ಥೆ, 5)ನೆಫ್ರೋ ಯುರಾಲಜಿ ಸಂಸ್ಥೆ, 6)ಕರ್ನಾಟಕ ಮಧುಮೇಹ ಸಂಸ್ಥೆ, 7)ಪಿ.ಎಸ್.ಎಸ್.ವೈ ವಿಕ್ಟೋರಿಯಾ ಆಸ್ಪತ್ರೆ, 8)ಒಪೆಕ್ ರಾಯಚೂರು, 9)ಗ್ಯಾಸ್ಟ್ರೋ ಎಂಟರಾಲಜಿ ಸಂಸ್ಥೆ, 10) ಡಿಮ್ಹಾನ್ಸ್ ಧಾರವಾಡ.<br>ಮುಂದುವರೆದು, ರಾಜ್ಯದ ಇತರೆ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ / ಪ್ರಗತಿಯಲ್ಲಿರುವ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಪ್ರಾದೇಶಿಕ ಘಟಕಗಳ ವಿವರಗಳು ಕೆಳಕಂಡಂತಿರುತ್ತವೆ.<br>1) ಮೈಸೂರು ನಗರದಲ್ಲಿ ಜಯದೇವ ಹೃದ್ರೋಗ ಸಂಸ್ಥೆ, ಕಿದ್ವಾಯಿ ಸ್ಮಾರಕ ಗಂಥಿ ಆಸ್ಪತ್ರೆ, ಕಾರ್ಯನಿರ್ವಹಿಸುತ್ತಿವೆ.<br>2) ಮಂಡ್ಯ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಕ್ಯಾನ್ಸರ್ ರೋಗಿಗಳಿಗೆ ಚಿಕಿತ್ಸೆ ನೀಡುವ ಕೇಂದ್ರ ವಿರುತ್ತದೆ.<br>3) ಗುಲ್ಬರ್ಗಾ ನಗರದಲ್ಲಿ ಜಯದೇವ ಹೃದ್ರೋಗ ಸಂಸ್ಥೆ, ಕಿದ್ವಾಯಿ ಸ್ಮಾರಕ ಗಂಥಿ ಆಸ್ಪತ್ರೆ, ಕಾರ್ಯನಿರ್ವಹಿಸುತ್ತಿವೆ.<br>4) ರಾಯಚೂರು ನಗರದಲ್ಲಿ ರಾಜೀವ್‌ಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಾರ್ಯನಿರ್ವಹಿಸುತ್ತಿವೆ.<br>5) ಬೆಳಗಾವಿ, ಕಾರವಾರ, ನಗರಗಳಲ್ಲಿ ಕಿದ್ವಾಯಿ ಸ್ಮಾರಕ ಗಂಥಿ ಆಸ್ಪತ್ರೆಗಳನ್ನು ಪ್ರಾರಂಭಿಸಲು ಕಾರ್ಯಸೂಚಿಗಳನ್ನು ತಯಾರಿಸಲಾಗುತ್ತಿದೆ ಹಾಗೂ ತುಮಕೂರು, ಹುಬ್ಬಳ್ಳಿ ನಗರಗಳಲ್ಲಿ ಕಟ್ಟಡ ಕಾಮಗಾರಿಗಳು ಪ್ರಗತಿಯಲ್ಲಿದೆ.<br>6) ಹುಬ್ಬಳ್ಳಿ ನಗರದಲ್ಲಿ ಜಯದೇವ ಹೃದ್ರೋಗ ಸಂಸ್ಥೆ, ಪ್ರಾರಂಭಿಸಲು ಕಾರ್ಯಸೂಚಿಗಳನ್ನು ತಯಾರಿಸಲಾಗುತ್ತಿದೆ.<br><br>ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಪ್ರಾರಂಭಿಸಲು ಇರುವ ಮಾನದಂಡಗಳ [illegible]. ಪ್ರತಿಯು WWW.rmc.org.in ನಲ್ಲಿ ಲಭ್ಯವಿರುತ್ತದೆ. |



Generated from eOffice by DR K SUDHAKAR, HFW-MIN(SK), HEALTH MINISTER, HEALTH AND FAMILY WELFARE SEC on 20/12/2022 04 34 PM

| | | |
|---|---|---|
| ಇ) | ಕೊಡಗು ಜಿಲ್ಲೆಗೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ನಿರ್ಮಿಸಲು ಕಳೆದ 5 ವರ್ಷಗಳಿಂದ ಒತ್ತಾಯಿಸುತ್ತಿದ್ದರೂ ಸಹ ಆಸ್ಪತ್ರೆಯನ್ನು ನಿರ್ಮಾಣ ಮಾಡುವ ಬಗೆಗಿನ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲದಿರಲು ಕಾರಣವೇನು; | ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಡಿಕೇರಿ ಅಧೀನ ಬೋಧಕ ಆಸ್ಪತ್ರೆಯು 300 ಹಾಸಿಗೆ ಸಾಮರ್ಥ್ಯ ಹೊಂದಿದ್ದು ಹೆಚ್ಚುವರಿಯಾಗಿ 450 ಹಾಸಿಗೆ ಸಾಮರ್ಥ್ಯದ ಮಲ್ಟಿ ಸ್ಪೆಷಾಲಿಟಿ ಕಟ್ಟಡ ಕಾಮಗಾರಿ ಪ್ರಗತಿಯಲ್ಲಿದ್ದು, ಲಭ್ಯವಿರುವ ಎಲ್ಲಾ ಚಿಕಿತ್ಸೆಗಳನ್ನು ಆಸ್ಪತ್ರೆಯಲ್ಲಿಯೇ ಒದಗಿಸಲಾಗುತ್ತಿದೆ. ಸೂಪರ್ ಸ್ಪೆಷಾಲಿಟಿ ಚಿಕಿತ್ಸೆ ಅಗತ್ಯ ಸಂದರ್ಭಗಳಲ್ಲಿ ಮಾತ್ರ ರೋಗಿಗಳ ಇಚ್ಛಾನುಸಾರ ಶಿಫಾರಸ್ಸು ಮಾಡಲಾಗುತ್ತಿದೆ. ಆದುದ್ದರಿಂದ ಮಡಿಕೇರಿ ಮತ್ತು ವಿರಾಜಪೇಟೆಯಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಪ್ರಾರಂಭಿಸುವ ಬಗ್ಗೆ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |
| ಈ) | ಕೊಡಗು ಜಿಲ್ಲೆಯಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಿಲ್ಲದೆ ತುರ್ತು ಸಂದರ್ಭಗಳಲ್ಲಿ ದೂರದ ಸ್ಥಳಕ್ಕೆ ರೋಗಿಗಳನ್ನು ಹೆಚ್ಚಿನ ಚಿಕಿತ್ಸೆಗಾಗಿ ಸ್ಥಳಾಂತರಿಸುವ ಸಂದರ್ಭದಲ್ಲಿ ರೋಗಿಗಳು ಪ್ರಾಣ ಕಳೆದುಕೊಂಡಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಮಡಿಕೇರಿ ಮತ್ತು ವಿರಾಜಪೇಟೆಯಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಪ್ರಾರಂಭಿಸುವ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು? | |

<u>ಕಡತ ಸಂ: ಎಂಇಡಿ 499 ಎಂ ಎಸ್ ಎಫ್ 2022</u>

(ಡಾ|| ಕೆ. ಸುಧಾಕರ್)
ಆರೋಗ್ಯ & ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು.